ಅ) ಜಿಲ್ಲಾ ಕೇಂದ್ರ ಸ್ಥಾನವಾದ ಕೊಪ್ಪಳ ನಗರಕ್ಕೆ ಹೊಸ ವೈದ್ಯಕೀಯ ಕಾಲೇಜನ್ನು ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಯಾವಾಗಿನಿಂದ ಪ್ರಾರಂಭಿಸಲಾಗುವುದು;

ಇ) ಈ ಕಾಲೇಜನ್ನು ಪ್ರಸಕ್ತ ಸಾಲಿನಲ್ಲಿಯೇ ಮಂಜೂರು ಮಾಡಲಾಗುವುದೇ;

ಈ) ಹಾಗಿದ್ದಲ್ಲಿ, ಕಾಲೇಜು ಪ್ರಾರಂಭಿಸಲು ಸರ್ಕಾರವು ಅನುದಾನವನ್ನು ನಿಗದಿಪಡಿಸಿದೆಯೇ;

ಉ) ಹಾಗಿದ್ದಲ್ಲಿ ಎಷ್ಟು ಪ್ರಮಾಣದಲ್ಲಿ ಅನುದಾನವನ್ನು ನಿಗದಿಪಡಿಸಲಾಗಿದೆ? ವಿವರಗಳನ್ನು ನೀಡುವುದು?

ಶ್ರೀ ರಾಮಚಂದ್ರಗೌಡ (ವೈದ್ಯಕೀಯ ಶಿಕ್ಷಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ

1204 ಶ್ರೀ ಖಾದರ್ ಯು.ಟಿ. (ಮಂಗಳೂರು) ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಷ್ಟ್ರೀಯ ಸ್ವಾಸ್ಥ ಬೀಮಾ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನ ಗೊಳಿಸಲಾಗಿದೆಯೇ;

ಆ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಈ ಯೋಜನೆ ಜಾರಿಗೊಂಡಿದೆ; ವಿವರ ನೀಡುವುದು?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು):

ಅ) ಈವರೆಗೆ ಅನುಷ್ಠಾನಗೊಳಿಸಿರುವುದಿಲ್ಲ. ಆದರೆ, 2009–10ನೇ ಸಾಲಿನಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ.

ಆ) 2009–10ನೇ ಸಾಲಿನಲ್ಲಿ ಈ ಯೋಜನೆಯನ್ನು ಈ ಕೆಳಕಂಡ 05 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ:–

1) ಮೈಸೂರು

2) ಬೆಂಗಳೂರು ಗ್ರಾಮಾಂತರ

3) ಬೆಳಗಾಂ

4) ದಕ್ಷಿಣ ಕನ್ನಡ

5) ಶಿವಮೊಗ್ಗ

ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ಮತ್ತು ಹಿಂದುಳಿದ ಮತ್ತು ಅಲ್ಪಸಂಖ್ಯಾತರ Hostel ಗಳ ಬಗ್ಗೆ

1206 ಶ್ರೀ ಖಾದರ್ ಯು.ಟಿ. (ಮಂಗಳೂರು) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗಗಳ ಮತ್ತು ಹಿಂದುಳಿದ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿ ನಿಲಯಗಳು ಎಷ್ಟಿವೆ; ತಾಲ್ಲೂಕುವಾರು ವಿವರ ನೀಡುವುದು;

ಆ) ಮಂಗಳೂರು ವಿಧಾನ ಸಭಾ ಕ್ಷೇತ್ರದಲ್ಲಿ ವಿದ್ಯಾರ್ಥಿಗಳ ಅಗತ್ಯಕ್ಕೆತಕ್ಕಂತೆ ವಿದ್ಯಾರ್ಥಿಗಳ ನಿಲಯಗಳು ಇವೆಯೇ;

ಇ) ಹಾಗಿಲ್ಲದಿದ್ದಲ್ಲಿ, ಹೊಸದಾಗಿ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು): ಅ) ಇಲಾಖಾ ವ್ಯಾಪ್ತಿಯಲ್ಲಿ ಒಟ್ಟು 90 ಮೆಟ್ರಿಕ್ ಪೂರ್ವ ಬಾಲಕ/ಬಾಲಕಿಯರ ಮತ್ತು ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯ ಕಾರ್ಯನಿರ್ವಹಿಸುತ್ತಿವೆ. ತಾಲ್ಲೂಕುವಾರು ವಿವರಗಳು ಈ ಕೆಳಕಂಡಂತಿವೆ.

ಕ್ರ ಸಂ.	ತಾಲ್ಲೂಕು	ಪರಿಶಿಷ್ಟ ಜಾತಿ	ಪರಿಶಿಷ್ಟ ಪಂಗಡ	ಹಿಂದುಳಿದ ವರ್ಗ	ಅಲ್ಪ ಸಂಖ್ಯಾತರು
1	ಮಂಗಳೂರು	11	1	17	2
2	ಸುಳ್ಯ	4	3	8	–
3	ಬೆಳ್ತಂಗಡಿ	2	4	12	–
4	ಬಂಟ್ವಾಳ	3	2	9	–
5	ಪುತ್ತೂರು	4	1	7	–
	ಒಟ್ಟು	24	11	53	2

ಆ) ಹೌದು.

ಇ) ಹೊಸದಾಗಿ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸುವ ಅವಶ್ಯಕತೆ ಕಂಡುಬರುವುದಿಲ್ಲ.